ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2016-17 ದಿನಾಂಕ: 15-02-2017

## ಪತ್ರಿಕಾ ಆಮಂತ್ರಣ

1. ಭಾರತರತ್ನ ಬಾಬಾಸಾಹೇಬ್ ಡಾ. ಬಿ.ಆರ್. ಅಂಬೇಡ್ಕರ್ ಅವರ 125ನೇ ವರ್ಷಾಚರಣೆಯ ಅಂತರಾಷ್ಟ್ರೀಯ ಸಮ್ಮೇಳನದ ಅಂಗವಾಗಿ ಡಾ. ಬಿ. ಆರ್. ಅಂಬೇಡ್ಕರ್ ಜ್ಞಾನದರ್ಶನ ಅಭಿಯಾನ ಉದ್ಘಾಟನಾ ಸಮಾರಂಭ:

   <u>ಉದ್ಘಾಟನೆ:</u>
   ಸಿದ್ದರಾಮಯ್ಯ, ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ.

   <u>ಅಧ್ಯಕ್ಷತೆ:</u>
   ಹೆಚ್. ಆಂಜನೇಯ, ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.

   ದಿನಾಂಕ 16-02-2017, ಗುರುವಾರ, ಮಧ್ಯಾಹ್ನ 3-30 ಗಂಟೆಗೆ.
   ಸ್ಥಳ: ಜ್ಞಾನಜ್ಯೋತಿ ಸಭಾಂಗಣ, ಸೆಂಟ್ರಲ್ ಕಾಲೇಜು ಆವರಣ, ಬೆಂಗಳೂರು.

2. **<u>Press Conference:</u>**

   **Priyanka Kharge, Minister for IT, BT and Tourism, GOK. In connection with setting up a training and skill development Center for Aerospace and Defence Sector.**

   **Date : 16-02-2017 Thursday, Time: 4.00 PM**

   **Place : Room No. 419, Vikasa Soudha, Bengaluru.**

## ಪತ್ರಿಕಾ ಪ್ರಕಟಣೆ

## ನಗರದ ಪೀಣ್ಯ ಬಳಿ ಕಲಾಗ್ರಾಮ ನಿರ್ಮಾಣ : ಕಮಲಮ್ಮ

ಬೆಂಗಳೂರು, ಫೆಬ್ರವರಿ 15, (ಕರ್ನಾಟಕ ವಾರ್ತೆ)

ಕರ್ನಾಟಕ ರಾಜ್ಯ ಕರಕುಶಲ ಅಭಿವೃದ್ಧಿ ನಗಮದ ವತಿಯಿಂದ ನಗರದ ಪೀಣ್ಯ ಬಳಿ ಇಪ್ಪತ್ತು ಎಕರೆ ಪ್ರದೇಶದಲ್ಲಿ ಕಲಾಗ್ರಾಮ ನಿರ್ಮಿಸಲಾಗುವುದು ಎಂದು ನಿಗಮದ ಅಧ್ಯಕ್ಷೆ ಶ್ರೀಮತಿ ಕಮಲಮ್ಮ ಅವರು ತಿಳಿಸಿದರು.

ವಿಕಾಸಸೌಧದಲ್ಲಿ ಅನಿವಾಸಿ ಭಾರತೀಯ ಸಮಿತಿಯ ಉಪಾಧ್ಯಕ್ಷರ ಕೊಠಡಿಯಲ್ಲಿ ಇಂದು ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಶ್ರೀಮತಿ ಕಮಲಮ್ಮ ಅವರು ಇಪ್ಪತ್ತು ಕೋಟಿ ರೂ. ವೆಚ್ಚದಲ್ಲಿ ಈ ಕಲಾಗ್ರಾಮ ನಿರ್ಮಿಸಲಾಗುತ್ತಿದ್ದು  ಮುಖ್ಯಮಂತ್ರಿಗಳು ಸಧ್ಯದಲ್ಲೇ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ ಎಂದರು.

ನುರಿತ ಕುಶಲಕರ್ಮಿಗಳು ತಯಾರಿಸಿದ ಕರಕುಶಲ ವಸ್ತುಗಳಿಗೆ ಮಾರುಕಟ್ಟೆ ಕಲ್ಪಿಸಲು ನಿಗಮವು ಕಾವೇರಿ ಕರ್ನಾಟಕ ರಾಜ್ಯ ಆರ್ಟ್ಸ್ ಮತ್ತು ಕ್ರಾಫ್ಟ್ ಎಂಪೋರಿಯಂ ಬ್ರಾಂಡ್ ಅಡಿಯಲ್ಲಿ ದೇಶಾದ್ಯಂತ 10 ಮಾರಾಟ ಮಳಿಗೆಗಳನ್ನು ತೆರೆಯಲಾಗಿದೆ ಎಂದ ಅವರು ವಿವಿಧ ಕಲೆಗಳಲ್ಲಿ ನುರಿತ ಸುಮಾರು ಐದು ಸಾವಿರ ಕುಶಲಕರ್ಮಿಗಳು ಈಗಾಗಲೇ ನಿಗಮದಲ್ಲಿ ತಮ್ಮ ಹೆಸರುಗಳನ್ನು ನೊಂದಾಯಿಸಿದ್ದಾರೆ ಎಂದರು.

ಬೆಂಗಳೂರು, ಮೈಸೂರು ಸೇರಿದಂತೆ ರಾಜ್ಯದಲ್ಲಿ 13 ಸ್ಥಳಗಳಲ್ಲಿ ಕಲಾ ಸಂಕೀರ್ಣವನ್ನು ಸ್ಥಾಪಿಸಿದ್ದು, ಸದರಿ ಸಂಕೀರ್ಣಗಳಿಗೆ ರಿಯಾಯಿತಿ ದರದಲ್ಲಿ ಕಚ್ಚಾವಸ್ತುಗಳನ್ನು ಸರಬರಾಜು ಮಾಡಲಾಗುತ್ತಿದೆ. ಅಲ್ಲದೆ, ವಿವಿಧ ಯೋಜನೆಗಳಡಿ ಈವರೆಗೆ 1222 ವಸತಿ ಕಾರ್ಯಾಗಾರಗಳನ್ನು ನಿರ್ಮಿಸಿ ಕುಶಲಕರ್ಮಿಗಳಿಗೆ ಹಂಚಲಾಗಿದೆ ಎಂದು ಅವರು ನಿಗಮದ ಅಂತರರಾಷ್ಟ್ರೀಯ ಮಾರುಕಟ್ಟೆ ವ್ಯಾಪಾರ ವಹಿವಾಟು ಹೆಚ್ಚಿಸಲು ಹಾಗೂ ವಿದೇಶಗಳಲ್ಲಿ ನಿಗಮಕ್ಕೆ ಹೆಚ್ಚು ಆದಾಯ ತರುವ ನಿಟ್ಟಿನಲ್ಲಿ ಅನಿವಾಸಿ ಭಾರತೀಯ ಸಮಿತಿಯ ಉಪಾಧ್ಯಕ್ಷರ ಸಹಕಾರ ಕೋರುವುದಾಗಿ ತಿಳಿಸಿದರು.

ವಿದೇಶಗಳಲ್ಲಿ ಕನ್ನಡ ಸಂಘ ಸಂಸ್ಥೆಗಳು ನಡೆಸುವ ಸಭೆ ಸಮಾರಂಭಗಳಲ್ಲಿ ನಮ್ಮ ರಾಜ್ಯದ ಕರಕುಶಲ ವಸ್ತುಗಳಿಗೆ ಬೇಡಿಕೆ ಹೆಚ್ಚಾಗುವಂತೆ ಕ್ರಮ ಜರುಗಿಸುವುದರ ಜೊತೆಗೆ ಬೇರೆ ಬೇರೆ ದೇಶಗಳ ರಾಯಭಾರಿ ಕಚೇರಿಗಳಿಗೆ ಈ ಸಂಬಂಧ ಪತ್ರ ಬರೆದು ನಿಗಮದ ಉತ್ಪನ್ನಗಳಿಗೆ ಹೆಚ್ಚು ಬೇಡಿಕೆ ಸಿಗುವಂತೆ ಕೆಲಸ ಮಾಡುವುದಾಗಿ ಅನಿವಾಸಿ ಭಾರತೀಯ ಸಮಿತಿಯ ಉಪಾಧ್ಯಾಕ್ಷರಾದ ಆರತಿ ಕೃಷ್ಣ ಅವರು ಇದೇ ಸಂದರ್ಭದಲ್ಲಿ ತಿಳಿಸಿದರು.

**knk:kpp:gpr**

# <u>2017 ನೇ ಸಾಲಿನ ರಸ್ತೆ ಸಂಚಾರ ಸಮೀಕ್ಷೆ</u>

ಬೆಂಗಳೂರು, ಫೆಬ್ರವರಿ 15, (ಕರ್ನಾಟಕ ವಾರ್ತೆ)

ಕರ್ನಾಟಕ ರಾಜ್ಯದ ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆಯ ವ್ಯಾಪ್ತಿಯಲ್ಲಿನ ರಾಜ್ಯ ಹೆದ್ದಾರಿಗಳು ಹಾಗೂ ಜಿಲ್ಲಾ ಮುಖ್ಯ ರಸ್ತೆಗಳ ಮೇಲೆ ಓಡಾಡುವ ವಾಹನಗಳ ಸಂಚಾರದ ಸಮೀಕ್ಷೆಯನ್ನು ನಡೆಸಲಾಗುತ್ತಿದ್ದು, 2017ನೇ ಸಾಲಿನ ರಸ್ತೆ ಸಂಚಾರ ಸಮೀಕ್ಷೆಯನ್ನು ಫೆಬ್ರವರಿ 22 ರ ಬೆಳಿಗ್ಗೆ 6.00 ಗಂಟೆಯಿಂದ ಫೆಬ್ರವರಿ 24 ರ ಬೆಳಿಗ್ಗೆ 6.00 ಗಂಟೆವರೆಗೆ ಸತತವಾಗಿ 2 ದಿನಗಳ ಕಾಲ ನಡೆಸಲಾಗುವುದು. ಈ ಸಮೀಕ್ಷೆಗೆ ಸುಮಾರು 3520 ಗಣತಿ ಕೇಂದ್ರಗಳನ್ನು ರಾಜ್ಯ ಹೆದ್ದಾರಿ ಮತ್ತು ಜಿಲ್ಲಾ ಮುಖ್ಯ ರಸ್ತೆಗಳ ಮೇಲೆ ಆಯ್ಕೆ ಮಾಡಲಾಗಿದ್ದು, ಇದಕ್ಕೆ ಸಹಾಯಕ ಇಂಜಿನಿಯರ್/ಕಿರಿಯ ಇಂಜಿನಿಯರ್‌ಗಳನ್ನು ನೇಮಿಸಲಾಗಿದೆ.

ಈ ಸಮೀಕ್ಷೆಯ ಮುಖ್ಯ ಉದ್ದೇಶ, ವಾಹನ ಸಂಚಾರದ ಬೆಳವಣಿಗೆ ತೀವ್ರತೆಯನ್ನು ಗಮನಿಸಿ ರಸ್ತೆಗಳ ಮೇಲ್ಮೈಯನ್ನು ಅಭಿವೃದ್ಧಿಪಡಿಸುವುದು, ರಸ್ತೆಗಳನ್ನು ಅಗಲಪಡಿಸುವುದು ಹಾಗೂ ರಸ್ತೆಗಳನ್ನು ಮೇಲ್ದರ್ಜೆಗೇರಿಸುವುದು ಆಗಿದೆ.

ಈ ವಾಹನ ಸಂಚಾರದ ಸಮೀಕ್ಷೆಯನ್ನು ಯಶಸ್ವಿಯಾಗಿ ನಡೆಸಲು ವಾಹನ ಚಾಲಕರು ಮತ್ತು ಸಾರ್ವಜನಿಕರು ಸಹಕರಿಸುವಂತೆ ಮುಖ್ಯ ಇಂಜಿನಿಯರ್ ಲೋಕೋಪಯೋಗಿ ಇಲಾಖೆ (ಸಂಪರ್ಕ ಮತ್ತು ಕಟ್ಟಡಗಳು, ದಕ್ಷಿಣ) ಇವರು ಪ್ರಕಟಣೆಯಲ್ಲಿ ಕೋರಿದ್ದಾರೆ.

**knk:gpr**

# <u>CONDUCTING OF 2017 ROAD TRAFFIC SURVEY</u>

**Bengaluru, February 15, (Karnataka Information)**

**Karnataka Public Works, Ports and Inland Water Transport Deparment, will conduct Road Traffic Survery on PWD roads in the State.**

**Road Traffic Survey will be conducted for the present year 2017 on State Highways and Major District Roads in the State from 22nd February 6 AM to 24th February 6**

**AM for a period of 2 days. The present Survey covers 3520 Count Posts situted on Stae Highways and Major District Roads in the State.**

**The objective of the Survey is to assess the traffic volume on different category of roads in the State, which will enable the Government to take decisions for improvements to existing roads, upgradation of roads to the higher categories, surface improvements, widening of roads etc.**

**The Traffic Survey data will be collected at the Count Posts by the nominated traffice enumerators ie. Assistant Engineer/Junior Engineers at about 3520 Count Posts in the State. All the vehicle operators and public in general are requested to co-operate for the Road Traffic Survey on these two days.**

**knk:gpr**